# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1208 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 07.03.2022 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಇದುವರೆವಿಗೂ ಪರಿಷ್ಕರಣೆ ಮಾಡದಿರಲು ಕಾರಣಗಳೇನು: | ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಚಾಲ್ತಿಯಲ್ಲಿದ್ದ 2006 ಮತ್ತು 2008ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿನ ಕೆಲವೊಂದು ಹುದ್ದೆಗಳಿಗೆ ತಿದ್ದುಪಡಿ / ಸೇರ್ಪಡೆ ಮಾಡುವ ಸಂಬಂಧ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಪತ್ರ ಸಂಖ್ಯೆ:ಡಿಟಿಇ/47/ಇಎಸ್‌ಟಿ(1)ಎ/2007, ದಿನಾಂಕ:15.03.2010ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಈ ಸಂಬಂಧ ಸರ್ಕಾರದ ಪತ್ರ ಸಂಖ್ಯೆ:ಇಡಿ/170/ಡಿಟಿಇ/2009, ದಿನಾಂಕ: 11.06.2010ರಲ್ಲಿ ಎಐಸಿಟಿಇಯ ಪರಿಷ್ಕೃತ ಮಾರ್ಗಸೂಚಿಗಳನ್ವಯ ಪರಿಶೀಲಿಸಿ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ತಾಂತ್ರಿಕ ಶಿಕ್ಷಣ ಇಲಾಖೆಗೆ ತಿಳಿಸಲಾಗಿದೆ.<br><br>2012 ಮತ್ತು 2016ರಲ್ಲಿ ಎಐಸಿಟಿಇಯು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಸದರಿ ಪರಿಷ್ಕೃತ ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳಲು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಹಿರಿಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಿ, ಇಲಾಖೆಯ ವೃಂದ ಮತ್ತು ನೇಮಕಾತಿಗೆ ತಿದ್ದುಪಡಿ ತರುವ ಸಂಬಂಧ ನಿರ್ದೇಶನಾಲಯದ ಪತ್ರ ಸಂಖ್ಯೆ: ಡಿಟಿಇ59ಇಎಸ್‌ಟಿ(1)ಎ2012 ದಿನಾಂಕ:24.06.2017ರಲ್ಲಿ ಸಮಗ್ರವಾಗಿ ಪರಿಶೀಲಿಸಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.<br><br>ಸರ್ಕಾರದ ಪತ್ರ ಸಂಖ್ಯೆ:ಇಡಿ 91 ಡಿಟಿಇ 2017 ದಿನಾಂಕ: 23.01.2018ರಲ್ಲಿ ಪ್ರಸ್ತಾವನೆಯ ಕುರಿತಂತೆ ಆರ್ಥಿಕ ಇಲಾಖೆ, ಶಾಸನ ರಚನೆ ಮತ್ತು ಸಂಸದೀಯ ವ್ಯವಹಾರ ಇಲಾಖೆ ಮತ್ತು ಸಿಬ್ಬಂದಿ ಮತ್ತು ಆಡಳಿತ |
| (ಆ) | ಸದರಿ ಪರಿಷ್ಕರಣೆಯ ಕಾರ್ಯ ಪ್ರಸ್ತುತ ಯಾವ ಹಂತದಲ್ಲಿದೆ; | |
| (ಇ) | ಸದರಿ ನಿಯಮಾವಳಿಗಳನ್ನು ಯಾವ ಕಾಲವಧಿಯೊಳಗೆ ಪರಿಷ್ಕರಣೆ ಮಾಡಲಾಗುವುದು? | |

| | | |
|---|---|---|
| | | ಸುಧಾರಣಾ ಇಲಾಖೆಗಳು ಕೆಲವೊಂದು ಅವಲೋಕನೆಗಳನ್ನು ಮಾಡಿದ್ದು, ಸದರಿ ಅವಲೋಕನೆಗಳನ್ನು ಅಳವಡಿಸಿಕೊಂಡು ಪರಿಷ್ಕರಿಸಿದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಸಲ್ಲಿಸುವಂತೆ ತಾಂತ್ರಿಕ ಶಿಕ್ಷಣ ಇಲಾಖೆಗೆ ತಿಳಿಸಲಾಗಿದ್ದು, ಅದರಂತೆ ನಿರ್ದೇಶನಾಲಯದ ಪತ್ರ ಸಂಖ್ಯೆ:ಡಿಟಿಇ59ಇಎಸ್‌ಟಿ (1)ಎ2013 ದಿನಾಂಕ:20.03.2018ರಲ್ಲಿ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಾವಳಿಗಳ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಸಂಸದೀಯ ವ್ಯವಹಾರ ಇಲಾಖೆಗಳ ಅಭಿಪ್ರಾಯ ಪಡೆಯಲಾಗಿ ಸದರಿ ಇಲಾಖೆಗಳು ನೀಡಿರುವ ಅಭಿಪ್ರಾಯಗಳನ್ನು ಕರಡು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಂಡು ಮರು ಪ್ರಸ್ತಾವನೆಯನ್ನು ಸಲ್ಲಿಸುವಂತೆ ಮತ್ತೊಮ್ಮೆ ತಾಂತ್ರಿಕ ಶಿಕ್ಷಣ ಇಲಾಖೆಗೆ ದಿನಾಂಕ:04.07.2018, ರಂದು ತಿಳಿಸಲಾಗಿದೆ. ಅದರಂತೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆರವರು ಪರಿಷ್ಕೃತ ಪ್ರಸ್ತಾವನೆಯನ್ನು ದಿನಾಂಕ:05.09.2018 & 22/02/2019ರಂದು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಸಂಸದೀಯ ವ್ಯವಹಾರ ಇಲಾಖೆಗಳ ಅಭಿಪ್ರಾಯ ಪಡೆಯಲಾಗಿ ಸದರಿ ಇಲಾಖೆಗಳು ನೀಡಿರುವ ಅಭಿಪ್ರಾಯಗಳನ್ನು ಕರಡು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಂಡು ಮರು ಪ್ರಸ್ತಾವನೆಯನ್ನು ಸಲ್ಲಿಸುವಂತೆ ಮತ್ತೊಮ್ಮೆ ತಾಂತ್ರಿಕ ಶಿಕ್ಷಣ ಇಲಾಖೆಗೆ ದಿನಾಂಕ:13.05.2019ರಲ್ಲಿ ತಿಳಿಸಲಾಗಿರುತ್ತದೆ.<br><br>ಏತನ್ಮಧ್ಯೆ, ಮಾರ್ಚ್-2019ರಲ್ಲಿ 07ನೇ ಎಐಸಿಟಿಇ ವೇತನ ಶ್ರೇಣಿ ಮತ್ತು ಪರಿಷ್ಕೃತ ಎಐಸಿಟಿಇ ಮಾರ್ಗಸೂಚಿಗಳು ಜಾರಿಗೆ ಬಂದಿದ್ದು, ಸದರಿ ಪರಿಷ್ಕೃತ ಮಾರ್ಗಸೂಚಿಗಳನ್ನು ಹಾಗೂ ಸರ್ಕಾರದ ಆದೇಶ ಸಂಖ್ಯೆ:ಇಡಿ 35 ಡಿಟಿಇ 2018 ದಿನಾಂಕ: 02.11.2019ರನ್ವಯ ಇಲಾಖೆಯಲ್ಲಿನ ಕೆಲವೊಂದು ಹುದ್ದೆಗಳನ್ನು ರದ್ದುಗೊಳಿಸಿ, ರದ್ದುಗೊಳಿಸಿದ ಹುದ್ದೆಗಳ ಬದಲಿಗೆ ಮರುಪದನಾಮೀಕರಣದೊಂದಿಗೆ ಮರು |

| | | |
|---|---|---|
| | | ಸೃಜನೆ ಮಾಡಿರುವ ಹುದ್ದೆಗಳನ್ನು ಮತ್ತು ಜನವರಿ 2020ರಲ್ಲಿ ಎಐಸಿಟಿಇಯು ಹೊರಡಿಸಿರುವ ಪರಿಷ್ಕೃತ ನಿಯಮಗಳನ್ನು ಹಾಗೂ ರಾಜ್ಯ ಸರ್ಕಾರದ ನಿಯಮ / ಆದೇಶ / ಮಾರ್ಗಸೂಚಿಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಂಡು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸುವ ಸಲುವಾಗಿ ನೂತನ ಕರಡು ವೃಂದ ಮತ್ತು ನೇಮಕಾತಿ ನಿಯಮಗಳ ಕರಡು ಅಧಿಸೂಚನೆಯನ್ನೊಳಗೊಂಡ ಪ್ರಸ್ತಾವನೆಯನ್ನು ಆಯುಕ್ತಾಲಯದ ಪತ್ರ ಸಂಖ್ಯೆ:ಡಿಟಿಇ 26 ಇಎಸ್‌ಟಿ(1) 2021, ದಿನಾಂಕ:18.02.2022ರಲ್ಲಿ ಸ್ವೀಕರಿಸಲಾಗಿದ್ದು, ನಿಯಮಾನುಸಾರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಿ ಕಾರ್ಯಗತಗೊಳಿಸಲು ಕ್ರಮವಹಿಸಲಾಗುವುದು. |

**ಇಡಿ 23 ಟಿಪಿಇ 2022**

**(ಡಾ|| ಅಶ್ವತ್ಥನಾರಾಯಣ್.ಸಿ.ಎನ್)**
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಇಲಾಖೆ ಸಚಿವರು